470(928) ಶ್ರೀ ಬಾಲರಾಜ್ ಎಸ್ (ಕೊಳ್ಳೇಗಾಲ) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ,

ಅ) ಕ್ಷೇತ್ರದ ಗ್ರಾಮೀಣ ಭಾಗದ ವಿದ್ಯಾರ್ಥಿಗಳೇ ಹೆಚ್ಚಾಗಿ ವಿದ್ಯಾಭ್ಯಾಸ ಮಾಡುವ ಕೊಳ್ಳೇಗಾಲ ಹಾಗೂ ಯಳಂದೂರು ತಾಲ್ಲೂಕು ಕೇಂದ್ರಗಳಲ್ಲಿರುವ ಪ್ರೌಢಶಾಲೆಗಳು ಹಾಗೂ ಪದವಿ ಪೂರ್ವ ಕಾಲೇಜುಗಳಲ್ಲಿ ಶೌಚಾಲಯದ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ,

ಆ) ಬಂದಿದ್ದರೆ, ಈ ಬಗ್ಗೆ ತೆಗೆದುಕೊಂಡ ಕ್ರಮಗಳೇನು,

ಇ) ಈ ಕೊರತೆಯನ್ನು ಈ ಸಾಲಿನಲ್ಲಾದರೂ ನೀಗಿಸಲಾಗುವುದೇ?

ಶ್ರೀ ಬಸವರಾಜ ಎಸ್ ಹೊರಟ್ಟಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು)

ಅ) ಬಂದಿದೆ

ಆ) ಪ್ರೌಢಶಾಲೆಗಳಿಗೆ ಶೌಚಾಲಯ ನಿರ್ಮಾಣಕ್ಕಾಗಿ ಆರ್ ಡಿ ಪಿ ಆರ್, ಎ ಆರ್ ಡಬ್ಲ್ಯೂ ಎಸ್, ಎಸ್ ಆರ್ ಡಬ್ಲ್ಯೂ ಎಸ್, ಸಂಪೂರ್ಣ ಸ್ವಚ್ಛತಾ ಆಂದೋಲನಾ ಯೋಜನೆಯಡಿಯಲ್ಲಿ ಅನುದಾನವನ್ನು ಒದಗಿಸಲಾಗುತ್ತಿದೆ ಅಲ್ಲದೇ ಆರ್ ಐ ಡಿ ಎಫ್–13 ಯೋಜನೆಯಡಿ ಇದಕ್ಕಾಗಿ ಅನುದಾನ ಒದಗಿಸಲು ಕ್ರಮ ಕೈಗೊಳ್ಳಲಾಗುತ್ತಿದೆ

ಇ) ಅನುದಾನದ ಲಭ್ಯತೆಯನ್ನು ಆಧರಿಸಿ ಈ ಕೊರತೆಯನ್ನು ನೀಗಿಸಲು ಕ್ರಮ ಕೈಗೊಳ್ಳಲಾಗುವುದು

471(929) ಶ್ರೀ ಬಾಲರಾಜ್ ಎಸ್ (ಕೊಳ್ಳೇಗಾಲ) \ ಮಾನ್ಯ ಜಲಸಂಪನ್ಮೂಲ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ,

ಅ) ಕೊಳ್ಳೇಗಾಲ ಕ್ಷೇತ್ರದ ಯಳಂದೂರು ಹಾಗೂ ಕೊಳ್ಳೇಗಾಲ ತಾಲ್ಲೂಕುಗಳಲ್ಲಿ ಅತೀ ಹೆಚ್ಚು ದೊಡ್ಡ ಕೆರೆಗಳು ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ,

ಆ) ಬಂದಿದ್ದಲ್ಲಿ, ಕಳೆದ ಸಾಲಿನಲ್ಲಿ ಈ ಕ್ಷೇತ್ರದ ಆರು ದೊಡ್ಡ ಕೆರೆಗಳನ್ನು ಅಭಿವೃದ್ಧಿಪಡಿಸಲು ಟೆಂಡರ್ ಕರೆದಿದ್ದು ನಿಜವೇ,

ಇ) ನಂತರ ಈ ಪ್ರಕ್ರಿಯೆ ನಿಲ್ಲಲು ಕಾರಣಗಳೇನು,

ಈ) ಮುಂದಿನ ದಿನಗಳಲ್ಲಾದರೂ ಹಂತ ಹಂತವಾಗಿ ಕೆರೆಗಳ ಅಭಿವೃದ್ಧಿ ಮಾಡಲಾಗುವುದೇ,

ಉ) ಹಾಗಿದ್ದಲ್ಲಿ, ಯಾವಾಗ ಪ್ರಾರಂಭಿಸಲಾಗುವುದು ಹಾಗೂ ಎಷ್ಟು ಕಾಲಮಿತಿಯೊಳಗೆ ಈ ಎಲ್ಲಾ ಕೆರೆಗಳನ್ನು ಅಭಿವೃದ್ಧಿಪಡಿಸಲಾಗುವುದು?

ಶ್ರೀ ಕೆ ಎಸ್ ಈಶ್ವರಪ್ಪ (ಜಲಸಂಪನ್ಮೂಲ ಸಚಿವರು)

ಅ) ಹೌದು

ಆ) ಹೌದು

ಇ) ಪ್ರಸ್ತಾಪಿತ ಕಾಮಗಾರಿಗಳು 2005–06ನೇ ಸಾಲಿನಲ್ಲಿನ ಕಾರ್ಯಕ್ರಮದಲ್ಲಿ ಸೇರದೇ ಇದ್ದುದರಿಂದ ಅವುಗಳ ಟೆಂಡರ್ ಪ್ರಕ್ರಿಯೆಯನ್ನು ಸ್ಥಗಿತಗೊಳಿಸಲಾಯಿತು

ಈ) ಪರಿಶೀಲಿಸಲಾಗುವುದು

ಉ) ಮೇಲಿನ ಉತ್ತರದಿಂದ ಈ ಪ್ರಶ್ನೆ ಉದ್ಭವಿಸುವುದಿಲ್ಲ

472(677) ಶ್ರೀ ಬಸವರಾಜ್ ರಾಯರೆಡ್ಡಿ (ಯಲಬರ್ಗಾ) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ,

ಅ) ರಾಜ್ಯದಲ್ಲಿ ಸರ್ಕಾರವು ಮಹಿಳೆಯರಿಗಾಗಿ ವಿಶೇಷವಾಗಿ ಮಹಿಳಾ ವಿಶ್ವವಿದ್ಯಾಲಯವನ್ನು ಸ್ಥಾಪಿಸಲಾಗುವುದೆ,

ಆ) ಹಾಗಿದ್ದಲ್ಲಿ ಇದರ ಕಾರ್ಯವ್ಯಾಪ್ತಿ ಮತ್ತು ಉದ್ದೇಶಗಳು ಏನು,

ಇ) ಇದನ್ನು ಯಾವ ಯಾವ ಜಿಲ್ಲೆಗಳಲ್ಲಿ ಸ್ಥಾಪಿಸಲು ಸರ್ಕಾರವು ಉದ್ದೇಶಿಸಿದೆ,

ಈ) ಇದೇ ರೀತಿ ಅಲ್ಪಸಂಖ್ಯಾತರ, ಪರಿಶಿಷ್ಟ ವರ್ಗದವರ, ಪರಿಶಿಷ್ಟ ಜಾತಿಯವರಿಗೆ ಪ್ರತ್ಯೇಕವಾಗಿ ವಿಶ್ವವಿದ್ಯಾಲಯ ಪ್ರಾರಂಭಿಸಲು ಸರ್ಕಾರವು ಉದ್ದೇಶಿಸಿದೆಯೇ?

ಶ್ರೀ ಡಿ ಎಚ್ ಶಂಕರಮೂರ್ತಿ (ಉನ್ನತ ಶಿಕ್ಷಣ ಸಚಿವರು)

ಅ) ಈಗಾಗಲೇ ಸ್ಥಾಪಿಸಲಾಗಿದೆ